


ದಿನಾಂಕ: 15-11-2024 ರಂದು ಮೈಸೂರಿನ ಜೆ.ಎಸ್.ಎಸ್ ಮಹಾ ವಿದ್ಯಾ ಪೀಠದ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾ ವಿದ್ಯಾಲಯ , ರಾಜ್ಯ ಪತ್ರಗಾರ ಇಲಾಖೆ ಹಾಗೂ ಮೈಸೂರ್ ವಿಭಾಗೀಯ ಪತ್ರಗಾರ ಇಲಾಖೆ ಆಶ್ರಯದಲ್ಲಿ ಎರಡು ದಿನಗಳ ಕಾಲ ನಡೆದ ಪ್ರಜಾಪ್ರತಿನಿಧಿ ಸಭೆ ಹಾಗೂ ಚಾರಿತ್ರಿಕ ಅವಲೋಕನ ಕುರಿತು ಎರಡು ದಿನಗಳ ಕಾಲ ನಡೆದ ರಾಷ್ಟ್ರ ಮಟ್ಟದ ವಿಚಾರ ಸಂಕಿರಣವನ್ನು ಸುತ್ತೂರು ಶ್ರೀಮಠದ ಶ್ರೀಗಳು ಸಾನಿಧ್ಯದಲ್ಲಿ ಗೌರವಾನ್ವಿತ ಸಭಾಪತಿಗಳಾದ ಶ್ರೀ ಬಸವರಾಜ್ ಹೊರಟ್ಟಿ ಅವರು ಉದ್ಘಾಟಿಸಿದರು.

ನಂತರ ಮಾತನಾಡಿದ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಜಗತ್ತಿಗೆ ಅತ್ಯುತ್ತಮ ಪ್ರಜಾಪ್ರಭುತ್ವವ ವ್ಯವಸ್ಥೆಯನ್ನು ಪರಿಚಯಿಸಿದ್ದು ನಮ್ಮ ಹೆಮ್ಮೆಯ ಭಾರತ ಎಂದು ಹೇಳಲು ಅತ್ಯಂತ ಸಂತಸ ಎನಿಸುತ್ತದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜಾಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ವದ್ದು. ದೇಶದ ಕಟ್ಟ ಕಡೆಯ ಪ್ರಜೆಗಳಿಗೆ ಪ್ರತಿಯೊಂದು ಸೌಲಭ್ಯಗಳನ್ನು ನಾಗರಿಕ ಹಕ್ಕುಗಳನ್ನ ತಲುಪಿಸುವ ದೊಡ್ಡ ಹೊಣೆಗಾರಿಕೆ ಪ್ರಜಾಪ್ರತಿನಿಧಿಗಳಿಗೆ ಇರುತ್ತದೆ. ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎಂಬ ತತ್ವದಡಿ ಪ್ರಜಾಪ್ರತಿನಿಧಿಗಳು ಕೆಲಸ ಮಾಡಿದರೆ ದೇಶ ಅತ್ಯಂತ ಸಂಪತ್ಭರಿತ ಸಮೃದ್ದಿ ರಾಷ್ಟ್ರವಾಗುವಲ್ಲಿ ಯಾವುದೇ ಸಂಶಯ ಇಲ್ಲ. ಇಂದು ನಡೆದ ರಾಜ್ಯ ಮಟ್ಟದ ವಿಚಾರ ಸಂಕೀರ್ಣ ವಿದ್ಯಾರ್ಥಿಗಳಿಗೆ ತಮ್ಮ ಮುಂದಿನ ಜೀವನದಲ್ಲಿ ದಾರಿದೀಪವಾಗಬಾರದು . ಇಂತಹ ಮಹತ್ವದ ವಿಚಾರ ಸಂಕೀರ್ಣಗಳು ಮೇಲಿಂದ ಮೇಲೆ ಎಲ್ಲಾ ಭಾಗಗಳಲ್ಲೂ ನಡೆಯುವಂತೆ ಆಗಬೇಕು. ಪ್ರಜಾಪ್ರಭುತ್ವದಲ್ಲಿ ಅತ್ಯಂತ ಕಟ್ಟಕಡೆಯ ಮನುಷ್ಯನು ಕೂಡ ಈ ದೇಶದ ಅತ್ಯುನ್ನತ ಹುದ್ದೆಯನ್ನು ಅಲಂಕರಿಸಬಹುದು. ಅಷ್ಟೊಂದು ಶಕ್ತಿ ಪ್ರಜಾಪ್ರಭುತ್ವಕ್ಕೆ ಇದೆ. ಶಾಲಾ ಹಂತದಲ್ಲಿ ಇಂಥ ವಿಚಾರ ಸಂಕೀರ್ಣಗಳು ಹೆಚ್ಚೆಚ್ಚು ನಡೆಯುವಂತಾಗಲಿ ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ರಾಜ್ಯ ಹಾಗೂ ವಿಭಾಗೀಯ ಪತ್ರಗಾರ ಇಲಾಖೆ ಹಿರಿಯ ಅಧಿಕಾರಿಗಳು ಮಹಾವಿದ್ಯಾಲಯದ ಪ್ರಾಚಾರ್ಯರು ಸಿಬ್ಬಂದಿ ವರ್ಗ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.